ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 3-11-2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಪತ್ರಿಕಾಗೋಷ್ಠಿ:<br>ಡಾ: ಖಮರುಲ್ ಇಸ್ಲಾಂ,<br>ಪೌರಾಡಳಿತ ಮತ್ತು ಅಲ್ಪಸಂಖ್ಯಾತರ ಕಲ್ಯಾಣ, ವಕ್ಫ್ ಖಾತೆ ಸಚಿವರು | 4-11-2015<br>ಬುಧವಾರ<br>ಮಧ್ಯಾಹ್ನ<br>1-30 ಗಂಟೆಗೆ | ಸಚಿವರ ಕಛೇರಿ,<br>ಕೊಠಡಿ ಸಂಖ್ಯೆ 317,<br>ಮೂರನೇ ಮಹಡಿ,<br>ವಿಧಾನ ಸೌಧ,<br>ಬೆಂಗಳೂರು |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ಬೇಕರಿ ತರಬೇತಿ

ಬೆಂಗಳೂರು, ನವೆಂಬರ್ 3 (ಕರ್ನಾಟಕ ವಾರ್ತೆ)

ಬೆಂಗಳೂರು ಕೃಷಿ ವಿಶ್ವವಿದ್ಯಾಲಯ ಬೇಕರಿ ತರಬೇತಿ ಕೇಂದ್ರದಿಂದ 4 ವಾರಗಳ ಬೇಕರಿ ತರಬೇತಿ ಕಾರ್ಯಕ್ರಮವನ್ನು ಆಸಕ್ತಿಯುಳ್ಳ ಬೇಕರಿ ಉದ್ಧಿಮೆದಾರರಿಗೆ ಮತ್ತು ಗೃಹಣಿಯರಿಗಾಗಿ ಆಯೋಜಿಸಲಾಗಿದೆ. ತರಬೇತಿಯು ದಿನಾಂಕ 04-11-2015 ರಿಂದ ಪ್ರಾರಂಭವಾಗಲಿದೆ. ಈ ತರಬೇತಿಯಲ್ಲಿ ಬ್ರೆಡ್,ಬನ್, ಪಫ್ಸ್, ಕೇಕ್‌ಗಳು, ವಿಶೇಷ ಬಿಸ್ಕತ್ತುಗಳು, ರೋಲ್ಸ್‌ಗಳು, ಪಿಡ್ಝಾ, ಡ್ಯಾನೀಶ್ ಫೆಸ್ಟರಿ ಹಾಗೂ ಮತ್ತಿತರ ಆಕರ್ಷಕ ಬೇಕರಿ ಪದಾರ್ಥಗಳನ್ನು ಕಲಿಸಲಾಗುವುದು. ಅಭ್ಯರ್ಥಿಗಳು ಸ್ವತ: ಪದಾರ್ಥ ತಯಾರಿಸುವ ಮೂಲಕ ಕಲಿಯುವ ಸೌಲಭ್ಯವಿದೆ. ಹೆಚ್ಚಿನ ವಿವರಗಳಿಗೆ ಸಂಯೋಜಕರು, ಬೇಕರಿ ತರಬೇತಿ ಕೇಂದ್ರ ವಿಸ್ತರಣಾ ನಿರ್ದೇಶನಾಲಯ,

ಕೃಷಿ ವಿಶ್ವವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು 560 024 ಇವರನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 080– 23513370 ಮೂಲಕ ಸಂಪರ್ಕಿಸಬಹುದು.

ಬಾಬು/ಕೆಎಂ

## One year Diploma in Baking Technology

## Bangalore, November 3, 2015

**The Bakery Training Unit, Directorate of Extension, UAS, Hebbal, Bangalore-560 024 will be offering One year Diploma in Baking Technology, for the benefit of students, Housewives and Entrepreneurs. Different types of Biscuits, Breads and Rolls, Puffs, Cakes, Pizza and other fancy items will be taught during the course. Participants will learn by preparing the product by themselves.**

**Applications are invited for One year Diploma in Baking Technology, Minimum qualification required is SSLC/10 th Standard. Candidates who successfully complete the course will have lot of job opportunities in Food and Bakery industry. The centre also arranges the Placement Services to the students in leading food/bakery industry.**

**All the raw materials will be provided by the Training Institute. The interested persons can contact Coordinator in person or through telephone no. 23513370 during office hours. Admission will be held on 18-11-2015.**

**babu/km**

## ರವೀ ನಮನ ಕಾರ್ಯಕ್ರಮ

ಬೆಂಗಳೂರು, ನವೆಂಬರ್ 3 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯವತಿಯಿಂದ ನವೆಂಬರ್ 5 ರಂದು ಬೆಳಿಗ್ಗೆ 11–30 ಗಂಟೆಗೆ ಬೆಂಗಳೂರು ನಗರದ ಕುಮಾರಪಾರ್ಕ್ ರಸ್ತೆಯಲ್ಲಿನ ಗಾಂಧೀ ಭವನದಲ್ಲಿ ಕನ್ನಡದ ಹೆಸರಾಂತ ಚಿತ್ರ ನಿರ್ದೇಶಕ ರವೀ (ಕೆಎಸ್ಎಲ್ ಸ್ವಾಮಿ) ಅವರ ಕುರಿತ ರವೀ ನಮನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ ಎಂದು ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಎಸ್. ವಿ. ರಾಜೇಂದ್ರ ಸಿಂಗ್ ಬಾಬು ಅವರು ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಸಾ.ರಾ. ಗೋವಿಂದು ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನಿರ್ದೇಶಕ ಎನ್. ಆರ್. ವಿಶುಕುಮಾರ್ ಅವರು ಪಾಲ್ಗೊಳ್ಳುವರು.

ಮುಖ್ಯ ಅತಿಥಿಗಳಾಗಿ ಹಿರಿಯ ಕಲಾವಿದರಾದ ದ್ವಾರಕೀಶ್, ಎಸ್. ಶಿವರಾಂ, ಶ್ರೀಮತಿ ಬಿ.ವಿ. ರಾಧಾ, ಹೆಚ್.ಜಿ. ಸೋಮಶೇಖರ್ ರಾವ್, ವಿಜಯಲಕ್ಷ್ಮೀ ಸಿಂಗ್, ಎಂ.ಎಸ್. ರಮೇಶ್, ಹಿರಿಯ ಚಲನಚಿತ್ರ ನಿರ್ದೇಶಕರಾದ ಎಸ್. ಕೆ. ಭಗವಾನ್, ಗಿರೀಶ್ ಕಾಸರವಳ್ಳಿ, ಸಿ.ವಿ. ಶಿವಶಂಕರ್, ರವೀ ಅವರ ಒಡನಾಡಿ ಕೃಪಾ, ಹಿರಿಯ ಪತ್ರಕರ್ತ ಗಂಗಾಧರ್ ಮೊದಲಿಯಾರ್ ಅವರು ಪಾಲ್ಗೊಳ್ಳುವರು ಎಂದು ಹೆಚ್. ಬಿ. ದಿನೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್‌ಬಿಡಿ:ಬಾಬು:ಜಿಪಿಆರ್.

# ಈ ವಾರದ ಬೆಳ್ಳಿಸಿನಿಮಾ–ಬೆಳ್ಳಿಮಾತು: " ಕೊಂಚಾವರಂ " ಚಲನಚಿತ್ರ ಪ್ರದರ್ಶನ, ಸಂವಾದ

ಬೆಂಗಳೂರು, ನವೆಂಬರ್ 3 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯು ಪ್ರತಿ ಶನಿವಾರ ನಡೆಸುವ ಬೆಳ್ಳಿಸಿನಿಮಾ–ಬೆಳ್ಳಿಮಾತು ಕಾರ್ಯಕ್ರಮದಡಿ ನವೆಂಬರ್ 7 ರ ಶನಿವಾರದಂದು ಬೆಳ್ಳಿ ಸಿನಿಮಾ " ಕೊಂಚಾವರಂ " ಚಲನಚಿತ್ರ ಪ್ರದರ್ಶನವನ್ನು ಏರ್ಪಡಿಸಿದೆ. ಈ ಚಿತ್ರದ ನಿರ್ದೇಶಕ ಪಿ. ಉಮೇಶ್ ನಾಯಕ್ ಅವರಿಂದ ಬೆಳ್ಳಿಮಾತು ಸಂವಾದ ಕಾರ್ಯಕ್ರಮ ನಡೆಯಲಿದೆ ಎಂದು ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.

ಬೆಂಗಳೂರು ಮಿಲ್ಲರ್ಸ್ ರಸ್ತೆಯ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ನವೆಂಬರ್ 7 ರಂದು ಸಂಜೆ 4–00 ಗಂಟೆಗೆ ನಡೆಯುವ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಎಸ್. ವಿ. ರಾಜೇಂದ್ರ ಸಿಂಗ್ ಬಾಬು ಅವರು ವಹಿಸುವರು. ಮುಖ್ಯ ಅತಿಥಿಗಳಾಗಿ ಮುಖ್ಯಮಂತ್ರಿ ಅಪ್ತ ಕಾರ್ಯದರ್ಶಿ ಜಿ. ಹೀರಾ ನಾಯಕ್, ಕರ್ನಾಟಕ ತಾಂಡ್ಯ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಬೋಜ್ಯ ನಾಯಕ್ ಮತ್ತು ಕೊಂಚಾವರಂ ಚಿತ್ರದ ಕಾರ್ಯಕಾರಿ ನಿರ್ಮಾಪಕ ಆರ್. ಶೇಖರ್ ಅವರು ಪಾಲ್ಗೊಳ್ಳುವರು ಎಂದು ಹೆಚ್. ಬಿ. ದಿನೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್‌ಬಿಡಿ:ಬಾಬು:ಜಿಪಿಆರ್.

## ಕೀ ಉತ್ತರ ಪ್ರಕಟ

ಬೆಂಗಳೂರು, ನವೆಂಬರ್ 3 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು 03-10-2015 ರಂದು ನಡೆಸಲಾದ ಕರ್ನಾಟಕ ಆಹಾರ ನಾಗರೀಕ ಸರಬರಾಜು ನಿಗಮ (ನಿ) ದಲ್ಲಿನ ಹಿರಿಯ ಸಹಾಯಕರು ಮತ್ತು ಕಿರಿಯ ಸಹಾಯಕರ ಹುದ್ದೆಗಳ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯ (ಪತ್ರಿಕೆ-4) ಮತ್ತು ದಿನಾಂಕ 04-10-2015 ರಂಡು ನಡೆಸಲಾದ ಕರ್ನಾಟಕ ರಾಜ್ಯದ ಸಿವಿಲ್ ಸೇವೆಯಡಿಯ ಸಹಾಯಕರು/ಪ್ರಥಮ ದರ್ಜೆ ಸಹಾಯಕರ ಹಾಗೂ ಕರ್ನಾಟಕ ಆಹಾರ ನಾಗರೀಕ ಸರಬವರಾಜು ನಿಗಮ (ನಿ) ದಲ್ಲಿನ್ ಹಿರಿಯ ಸಹಾಯಕರ ಹುದ್ದೆಗಳ ಹಾಗೂ ದಿನಾಂಕ 18-10-2015 ರಂದು ನಡೆಸಲಾದ ಕಿರಿಯ ಸಹಾಯಕರು/ದ್ವಿತೀಯ ದರ್ಜೆ ಸಹಾಯಕರ ಕರ್ನಾಟಕ ಆಹಾರ ನಾಗರೀಕ ಸರಬರಾಜು ನಿಗಮ (ನಿ) ದಲ್ಲಿನ ಕಿರಿಯ ಸಹಾಯಕರು ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಯ ಕೀ ಉತ್ತರಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಆಯೋಗದ ವೆಬ್‌ಸೈಟ್ http://kpsc.kar.nic.in/Key Answers

ಕೀ ಉತ್ತರಗಳ ಬಗ್ಗೆ ಆಕ್ಷೇಪಣೆ ಇದ್ದಲ್ಲಿ, ಅಭ್ಯರ್ಥಿಗಳು ಆಕ್ಷೇಪಣೆಗಳನ್ನು ಪುಷ್ಠೀಕರಿಸುವ ಆಧಾರಗಳುಳ್ಳ ಪುಸ್ತಕಗಳ ಹೆಸರು, ಲೇಖಕರ ಹೆಸರು, ವಿಷಯ, ಪ್ರಶ್ನೆ ಪತ್ರಿಕೆಯ ಶ್ರೇಣಿ ಪ್ರಶ್ನೆ ಸಂಖ್ಯೆ ಇತ್ಯಾದಿ ವಿವರಣೆಯೊಂದಿಗೆ ದಿನಾಂಕ : 11-11-2015 ರೊಳಗಾಗಿ ಪರೀಕ್ಷಾ ನಿಯಂತ್ರಕರು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು – 01 ಇವರಿಗೆ ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗಿರುವ ನಿಗದಿತ ನಮೂನೆಯಲ್ಲಿ (ದ್ವಿಪ್ರತಿಯಲ್ಲಿ) ಸಲ್ಲಿಸಬಹುದಾಗಿದೆ. ನಿಗದಿತ ನಮೂನೆಯಲ್ಲಿಲ್ಲದ ಮತ್ತು ದಿನಾಂಕ 11-11-2015 ರ ನಂತರ ಬರುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಬಾಬು:ಜಿಪಿಆರ್.

## ಬೇಕರಿ ತಂತ್ರಜ್ಞಾನದಲ್ಲಿ ಒಂದು ವರ್ಷದ ಡಿಪ್ಲೋಮಾ

ಬೆಂಗಳೂರು, ಅಕ್ಟೋಬರ್ 31 (ಕರ್ನಾಟಕ ವಾರ್ತೆ)

ಬೇಕರಿ ತರಬೇತಿ ಘಟಕದ ವತಿಯಿಂದ ಬೇಕರಿ ತಂತ್ರಜ್ಞಾನದಲ್ಲಿ ಒಂದು ವರ್ಷದ ಡಿಪ್ಲೋಮ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ದಿನಾಂಕ 18-11-2015 ರಿಂದ ಪ್ರಾರಂಭವಾಗಲಿದೆ. ಈ ತರಬೇತಿಯಲ್ಲಿ ಬ್ರೆಡ್, ಬನ್, ಪಫ್ಸ್, ಕೇಕ್‌ಗಳು, ವಿಶೇಷ ಬಿಸ್ಕತ್ತುಗಳು, ರೋಲ್ಸ್‌ಗಳು ಮತ್ತಿತರ ಆಕರ್ಷಕ

ಬೇಕರಿ ಪದಾರ್ಥಗಳನ್ನು ಕಲಿಸಲಾಗುವುದು. ಅಭ್ಯರ್ಥಿಗಳು ಸ್ವತ: ಪದಾರ್ಥ ತಯಾರಿಸುವ ಮೂಲಕ ಕಲಿಯುವ ಸೌಲಭ್ಯವಿದೆ.

ಬೇಕರಿ ತಂತ್ರಜ್ಞಾನದಲ್ಲಿ ಒಂದು ವರ್ಷದ ಡಿಪ್ಲೋಮ ವಿದ್ಯಾರ್ಥಿಗೆ ಕನಿಷ್ಟ ಎಸ್.ಎಸ್.ಎಲ್.ಸಿ./ಹತ್ತನೇ ತರಗತಿ ಉತ್ತೀರ್ಣರಾಗಿರಬೇಕು. ಡಿಪ್ಲೋಮ ಪಡೆದವರಿಗೆ ಆಹಾರ ಮತ್ತು ಬೇಕರಿ ಉದ್ದಿಮೆಯಲ್ಲಿ ಉತ್ತಮ ಉದ್ಯೋಗಾವಕಾಶಗಳಿರುತ್ತವೆ. ಜೊತೆಗೆ ವಿವಿಧ ಆಹಾರ ಉದ್ದಿಮೆಗಳಲ್ಲಿ ಕೆಲಸ ನಿರ್ವಹಿಸಲು ಅವಕಾಶ ಮಾಡಿಕೊಡಲಾಗುವುದು.

ಹೆಚ್ಚಿನ ವಿವರಗಳಿಗೆ ಸಂಯೋಜಕರು, ಬೇಕರಿ ತರಬೇತಿ ಕೇಂದ್ರ, ವಿಸ್ತರಣಾ ನಿರ್ದೇಶನಾಲಯ, ಕೃಷಿ ವಿಶ್ವವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು – 560 024 ಇವರನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 080 – 23513370 ಮೂಲಕ ಕಚೇರಿಯ ಕೆಲಸದ ವೇಳೆಯಲ್ಲಿ ಸಂಪರ್ಕಿಸಲು ಕೋರಲಾಗಿದೆ.

ಬಾಬು:ಜಿಪಿಆರ್.

## ಪಂಚಾಯತ್ ರಾಜ್ ವ್ಯವಸ್ಥೆ ಬದಲಾವಣೆ – ಸಚಿವ ಸಂಪುಟ ತೀರ್ಮಾನಕ್ಕೆ

ಬೆಂಗಳೂರು, ಅಕ್ಟೋಬರ್ 31 (ಕರ್ನಾಟಕ ವಾರ್ತೆ)

ಪಂಚಾಯತ್ ರಾಜ್ ವ್ಯವಸ್ಥೆ ಬಲಪಡಿಸುವ ಸಂಬಂಧ ಶಾಸಕ ರಮೇಶ್‌ಕುಮಾರ್ ಸಮಿತಿ ವರದಿ ಶಿಫಾರಸ್ಸುಗಳನ್ನು ಮುಂದಿನ ಸಚಿವ ಸಂಪುಟದಲ್ಲಿ ಚರ್ಚಿಸಿ ಅಂತಿಮ ತೀರ್ಮಾನಕ್ಕೆ ಬರಲಾಗುವುದು ಎಂದು ಅವರು ತಿಳಿಸಿದರು.

ವಿಧಾನಸೌಧದಲ್ಲಿ ಇಂದು ಭೇಟಿಯಾದ ಪತ್ರಕರ್ತರೊಂದಿಗೆ ಮಾತನಾಡಿದ ಸಚಿವರು ಇದೇ ತಿಂಗಳು ಅಧಿವೇಶನ ನಡೆಯಲಿದ್ದು, ಸಚಿವ ಸಂಪುಟದಲ್ಲಿ ಅನುಮೋದನೆ ಪಡೆದು ಅಧಿವೇಶನದಲ್ಲಿ ಮಂಡಿಸಲಾಗುವುದು ಎಂದರು.

ಕಳಸ–ಬಂಡೂರಿ ಹಾಗೂ ಮಹಾದಾಯಿ ನದಿ ನೀರಿನ ಸಮಸ್ಯೆಗಳ ಕುರಿತಂತೆ ನ್ಯಾಯವಾದಿ ನಾರಿಮನ್ ಅವರ ಜೊತೆ ಚರ್ಚಿಸಲಾಗಿದ್ದು, ಈ ಕುರಿತಂತೆ ಕಾನೂನು ಪ್ರಕ್ರಿಯೆಗೆ ಕ್ರಮ ಕೈಗೊಳ್ಳಲಾಗಿದೆ ಎಂದು ಇದೇ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ ತಿಳಿಸಿದರು.

ಬಾಬು:ಕೆಪಿಪಿ:ಜಿಪಿಆರ್.

## REPORTS OF THE LAW COMMISSION IN THE WEBSITE

**Bangalore November 3 (Karnataka Information)**

**The details of the Contribution and Reports of the Law Commission of Karnataka submitted to the Government of Karnataka on various subjects/copies accessable to the public in its website http://www.karnataka.gov.in/lawcommission.**

**babu/kpp/gpr**

## ಪ್ಲಾಸ್ಟಿಕ್ ಮುಕ್ತತೆ : ಕರಡು ನಿರ್ದೇಶನ ಪ್ರಕಟ

ಬೆಂಗಳೂರು, ನವೆಂಬರ್ 3 (ಕರ್ನಾಟಕ ವಾರ್ತೆ)

ಪ್ಲಾಸ್ಟಿಕ್ ಕ್ಯಾರಿಬ್ಯಾಗ್‌ಗಳು ಅಲ್ಪಾವಧಿ ಹಾಗೂ ದೀರ್ಘಾವಧಿಯಲ್ಲಿ ಪರಿಸರಕ್ಕೆ ಹಾನಿಯನ್ನು ಮತ್ತು ಆರೋಗ್ಯಕ್ಕೆ ಆಪಾಯವನ್ನು ಉಂಟುಮಾಡಲು ಕಾರಣವಾಗುತ್ತದೆ.

ಭಾರತದ ಸಂವಿಧಾನದ ಕಲಂ 48ಎ ಅನ್ವಯ ಪ್ರತಿ ರಾಜ್ಯ ಸರ್ಕಾರವೂ ಪರಿಸರದ ಮಟ್ಟವನ್ನು ಉತ್ತಮ ಮಾಡುವ ಜವಾಬ್ದಾರಿಯನ್ನು ಹೊಂದಿರುತ್ತದೆ.

ಪ್ಲಾಸ್ಟಿಕ್ ಕ್ಯಾರಿಬ್ಯಾಗ್‌ಗಳು, ಭಿತ್ತಿಪತ್ರಗಳು, ತೋರಣಗಳು, ಫ್ಲೆಕ್ಸ್‌ಗಳು, ಬಾವುಟಗಳು, ಪ್ಲಾಸ್ಟಿಕ್ ತಟ್ಟೆಗಳು, ಪ್ಲಾಸ್ಟಿಕ್ ಲೋಟಗಳು, ಪ್ಲಾಸ್ಟಿಕ್ ಹಾಳೆಗಳು (ಊಟದ ಮೇಜಿನ ಮೇಲೆ ಹರಡುವ) ಸಮಾರಂಭಗಳಲ್ಲಿ ಊಟೋಪಚಾರಕ್ಕೆ ವ್ಯಾಪಕ ಬಳಕೆಯಿಂದಾಗಿ ಪರಿಸರಕ್ಕೆ ಹಾನಿ ಹಾಗೂ ಮಾನವನ ಮತ್ತಿತರ ಪ್ರಾಣಿಗಳ ಆರೋಗ್ಯಕ್ಕೆ ಅಪಾಯವನ್ನು ಉಂಟುಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಪ್ಲಾಸ್ಟಿಕ್ ತ್ಯಾಜ್ಯಗಳು, ಚರಂಡಿಗಳ, ಮೋರಿಗಳ ಮತ್ತು ಒಳಚಂಡಿಗಳ ಸರಾಗ ಹರಿವಿಗೆ ತಡೆಯನ್ನು ಉಂಟುಮಾಡುತ್ತಿದ್ದು, ಇದರಿಂದಾಗಿ ಪರಿಸರ ಹಾನಿಯ ಗಂಭೀರ ಸಮಸ್ಯೆಗಳು ಉದ್ಭವಿಸಿರುತ್ತದೆ.

ಇಂತಹ ಸಮಸ್ಯೆಗಳು ಎಲ್ಲೆಡೆ ಉದ್ಭವಿಸಿರುವುದನ್ನು ಪರಿಣಾಮಕಾರಿಯಾಗಿ ತಡೆಯುವ ದೃಷ್ಟಿಯಿಂದ, ರಾಜ್ಯ ಸರ್ಕಾರಕ್ಕೆ ಪರಿಸರ (ಸಂರಕ್ಷಣೆ) ಕಾಯಿದೆ 1986 ರ ಸೆಕ್ಷನ್ ಪ್ರದತ್ತವಾಗಿರುವ ಪರಮಾಧಿಕಾರವನ್ನು ಬಳಸಿಕೊಂಡು, ಪ್ಲಾಸ್ಟಿಕ್ ಕ್ಯಾರಿಬ್ಯಾಗ್‌ಗಳ, ಭಿತ್ತಿಪತ್ರಗಳ, ತೋರಣಗಳ, ಫ್ಲೆಕ್‌ಗಳ, ಬಾವುಟಗಳ, ಪ್ಲಾಸ್ಟಿಕ್ ತಟ್ಟೆಗಳ, ಪ್ಲಾಸ್ಟಿಕ್ ಲೋಟಗಳ, ಪ್ಲಾಸ್ಟಿಕ ಹಾಳೆಗಳ (ಊಟದ ಮೇಜಿನ ಮೇಲೆ ಹರಡುವ) ಸಮಾರಂಭಗಳಲ್ಲಿ ಊಟೋಪಚಾರಕ್ಕೆ ಬಳಸುವ ಬಳಕೆಯನ್ನು ನಿಷೇಧಿಸಲು ಪ್ರಸ್ತಾಪಿಸಿರುವುದರಿಂದ.

ಪರಿಸರ (ಸಂರಕ್ಷಣೆ) ಕಾಯಿದೆ 1986 ರ ನಿಯಮ 4(3ಎ) ಅನುಸಾರ, ಕೆಳಕಂಡ ಕರಡು ನಿರ್ದೇಶನವನ್ನು ಹೊರಡಿಸಲು ಪ್ರಸ್ತಾಪಿಸುತ್ತದೆ.

ಯಾವುದೇ ವ್ಯಕ್ತಿ, ಸಂಘ-ಸಂಸ್ಥೆಗಳು ಸದರಿ ಕರಡು ನಿರ್ದೇಶನದಲ್ಲಿರುವ ಸೂಚನೆಯ ಬಗ್ಗೆ ತಮ್ಮ ಪ್ರತಿರೋಧವನ್ನು ವ್ಯಕ್ತಪಡಿಸುವುದಾದರೆ ಅಥವಾ ತಮ್ಮ ಸಲಹೆಗಳು ನೀಡುವುದಾದರೆ ಅವುಗಳನ್ನು ಲಿಖಿತವಾಗಿ ಈ ಅಧಿಸೂಚನೆಯು ರಾಜ್ಯಪತ್ರದಲ್ಲಿ ಪ್ರಕಟಗೊಂಡ ಮೂವತ್ತು ದಿನಗಳ ಅವಧಿಯೊಳಗೆ ಅಂಚೆಯ ಮೂಲಕ ಸರ್ಕಾರದ ಕಾರ್ಯದರ್ಶಿ (ಪರಿಸರ ಮತ್ತು ಜೀವಿಶಾಸ್ತ್ರ) ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ನಂ 709, 4ನೇ ದ್ವಾರ, 7ನೇಮಹಡಿ, ಬಹುಮಹಡಿ ಕಟ್ಟಡ, ಅಂಬೇಡ್ಕರ್ ವೀಧಿ, ಬೆಂಗಳೂರು – 560 001 ಇವರಿಗೆ ಸಲ್ಲಿಸಬಹುದಾಗಿರುತ್ತದೆ. ಮುಂದುವರಿದು, ಈ ಕರಡು ಅಧಿಸೂಚನೆಯು ರಾಜ್ಯಪತ್ರದಲ್ಲಿ ಪ್ರಕಟಗೊಂಡ ದಿನದಿಂದ ಅಥವಾ ಮೂವತ್ತು ದಿನಗಳ ಅವಧಿ ಪೂರ್ಣಗೊಂಡ ಕೂಡಲೇ ಅಥವಾ ಸಾರ್ವಜನಿಕರಿಗೆ ತಲುಪಿದ ದಿನದಿಂದ ಈ ನಿರ್ದೇಶನವು ಜಾರಿಗೆ ಬರುವುದೆಂದು ಸೂಚಿಸಲಾಗಿದೆ.

## ಕರಡು ನಿರ್ದೇಶನ

1. ಯಾವುದೇ ವ್ಯಕ್ತಿ, ಅಂಗಡಿ ಮಾಲೀಕ, ಮಾರಾಟಗಾರ, ಸಗಟುಮಾರಾಟಗಾರ ಅಥವಾ ಚಿಲ್ಲರೆ ವ್ಯಾಪಾರಿ, ವ್ಯಾಪಾರಿ ಮತ್ತು ಮಾರಾಟಗಾರರು, ಯಾವುದೇ ದಪ್ಪದ ಯಾವುದೇ ರೀತಿಯ ಪ್ಲಾಸ್ಟಿಕ್ ಕ್ಯಾರಿಬ್ಯಾಗ್‌ಗಳು, ಭಿತ್ತಿಪತ್ರಗಳು, ತೋರಣಗಳು, ಫ್ಲೆಕ್ಸ್‌ಗಳು, ಪ್ಲಾಸ್ಟಿಕ್ ಬಾವುಟಗಳು, ಪ್ಲಾಸ್ಟಿಕ್ ತಟ್ಟೆಗಳು, ಪ್ಲಾಸ್ಟಿಕ್ ಲೋಟಗಳು, ಪ್ಲಾಸ್ಟಿಕ್ ಹಾಳೆಗಳನ್ನು (ಊಟದ ಮೇಜಿನ ಮೇಲೆ ಹರಡುವ ) ಸಮಾರಂಭಗಳಲ್ಲಿ ಊಟೋಪಚಾರಕ್ಕೆ ಬಳಕೆ ಮಾಡುವುದನ್ನು ನಿಷೇಧಿಸಲಾಗಿದೆ. ಮುಂದುವರೆದು, ಯಾವುದೇ ಕೈಗಾರಿಕೆ ಅಥವಾ ವ್ಯಕ್ತಿ ಯಾವುದೇ ದಪ್ಪದ ಯಾವುದೇ ರೀತಿಯ ಪ್ಲಾಸ್ಟಿಕ್ ಕ್ಯಾರಿಬ್ಯಾಗ್‌ಗಳ, ಭಿತ್ತಿಪತ್ರಗಳ, ತೋರಣಗಳ, ಫ್ಲೆಕ್ಸ್‌ಗಳ, ಪ್ಲಾಸ್ಟಿಕ್ ಬಾವುಟಗಳ, ಪ್ಲಾಸ್ಟಿಕ್ ತಟ್ಟೆಗಳ, ಪ್ಲಾಸ್ಟಿಕ್ ಲೋಟಗಳ, ಪ್ಲಾಸ್ಟಿಕ್ ಹಾಳೆಗಳ(ಊಟದ ಮೇಜಿನ ಮೇಲೆ ಹರಡುವ) ತಯಾರಿಕೆ, ಸರಬರಾಜು, ಸಂಗ್ರಹಣೆ, ಸಾಗಾಣಿಕೆ, ಮಾರಾಟ ಮತ್ತು ವಿತರಣೆ ಮಾಡುವುದನ್ನು ನಿಷೇಧಿಸಿದೆ. ಈ ನಿರ್ದೇಶನವು ಅಧಿಸೂಚನೆಯಾಗಿ ರಾಜ್ಯ ಪತ್ರದಲ್ಲಿ ಪ್ರಕಟಗೊಂಡ ದಿನದಿಂದ ಜಾರಿಗೆ ಬರುತ್ತದೆ.

ಅಧಿಕೃತವಾಗಿ ರಫ್ತು ಮಾಡುವ ಉದ್ದೇಶಕ್ಕೆ ಹಾಗೂ ಕಾಯ್ದಿರಿಸಲಾದ ರಫ್ತು ಆರ್ಡರ್ ಮೇರೆಗೆ ಉತ್ಪಾದಿಸಲಾದ ಪ್ಲಾಸ್ಟಿಕ್ ಕ್ಯಾರಿಬ್ಯಾಗ್‌ಗಳ ತಯಾರಿಕೆಯನ್ನು ಪ್ಲಾಸ್ಟಿಕ್ ತ್ಯಾಜ್ಯ (ಬಳಕೆ ಮತ್ತು ನಿರ್ವಹಣೆ) ನಿಯಮಗಳು 2011 ರ ನಿಯಮ 2 ರನ್ವಯ, ಮೇಲಿನ ಅಧಿಸೂಚನೆಯು ಅನ್ವಯವಾಗುವುದಿಲ್ಲ. ಅಲ್ಲದೆ, ನರ್ಸರಿಗಳಲ್ಲಿ, ಡೈರಿ (ಹೈನು ಉತ್ಪನ್ನಗಳು), ಆರೋಗ್ಯ ಕ್ಷೇತ್ರ ಮುಂತಾದ ವಿಭಾಗಗಳಲ್ಲಿ ಉಪಯೋಗಿಸಲ್ಪಡುವ ಪ್ಲಾಸ್ಟಿಕ್ ಕೈಚೀಲ ಅಥವಾ ಪ್ಲಾಸ್ಟಿಕ್ ಉತ್ಪನ್ನಗಳನ್ನು ಉಪಭೋಗಕ್ಕಲದೇ ಬಳಸುವುದನ್ನು ಸಹ ಈ ಅಧಿಸೂಚನೆಯಿಂದ ವಿನಾಯಿತಿ ನೀಡಲಾಗಿದೆ.

2. ಈ ನಿರ್ದೇಶನವನ್ನು ಕೆಳಗೆ ಪಟ್ಟಿಮಾಡಿರುವ ಅಧಿಕಾರಿಗಳಿಗೆ ನಿಯಮಾನುಸಾರ ಪ್ರದತ್ತವಾಗಿರುವ ಅಧಿಕಾರದಂತೆ ಜಾರಿಗೊಳಿಸಬಹುದಾಗಿರುತ್ತದೆ:

ಅ. ಆಯುಕ್ತರು, ಜಂಟಿ ಅಯುಕ್ತರುಗಳು, ಜಿಲ್ಲಾಧಿಕಾರಿಗಳು ಮತ್ತು ಬೃಹತ್ ಬೆಂಗಳೂರು ಮಹಾನಗರಪಾಲಿಕೆಯಡಿಯಲ್ಲಿನ ಎಲ್ಲಾ ಸಾರ್ವಜನಿಕ ಆರೋಗ್ಯಾಧಿಕಾರಿಗಳು.

ಆ. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು,

ಇ. ರಾಜ್ಯದ ಎಲ್ಲಾ ಆಯುಕ್ತರು, ಮುಖ್ಯಾಧಿಕಾರಿಗಳು ಮತ್ತು ಆರೋಗ್ಯಾಧಿಕಾರಿಗಳು ಎಲ್ಲಾ ಸ್ಥಳೀಯ ಸಂಸ್ಥೆಗಳ ಸದಸ್ಯರು.

ಈ. ಎಲ್ಲಾ ಪ್ರಾದೇಶಿಕ ಅಧಿಕಾರಿಗಳು/ಕರ್ನಾಟಕ ರಾಜ್ಯ ಪರಿಸರ ಮಂಡಳಿಯ ಪರಿಸರ ಅಧಿಕಾರಿಗಳು.

ಉ. ಕಂದಾಯ ಇಲಾಖೆಯ ಎಲ್ಲಾ ಸಹಾಯಕ ಆಯುಕ್ತರುಗಳು.

ಊ. ಎಲ್ಲಾ ತಾಲ್ಲೂಕುಗಳ ತಹಸೀಲ್ದಾರರು,

ಋ. ವಾಣಿಜ್ಯ ತೆರಿಗೆ ಇಲಾಖೆಯ ಎಲ್ಲಾ ಅಧಿಕಾರಿಗಳು.

ಋ. ಆಹಾರ ಮತ್ತು ನಾಗರೀಕ ಪೂರೈಕೆ ಇಲಾಖೆಯ ಎಲ್ಲಾ ಅಧಿಕಾರಿಗಳು.

3. ಈ ನಿರ್ದೇಶನವನ್ನು ಉಲ್ಲಂಘಿಸಿದ ಸಂದರ್ಭದಲ್ಲಿ ಕೆಳಕಂಡ ಅಧಿಕಾರಿಗಳು ಅಪರಾಧದ ಸ್ವರೂಪಕ್ಕೆ ಅನುಗುಣವಾಗಿ ಪರಿಸರ (ಸಂರಕ್ಷಣೆ) ಕಾಯಿದೆ, 1986 ಸೆಕ್ಷನ್ 19 ರ ಅನ್ವಯ ಪ್ರದತ್ತವಾಗಿರುವ ಪರಮಾಧಿಕಾರದಂತೆ ಕಾನೂನು ಕ್ರಮ ಜರುಗಿಸುವರು.

ಅ. ಸರ್ಕಾರದ ಕಾರ್ಯದರ್ಶಿ, (ಪರಿಸರ ಮತ್ತು ಜೀವಿಶಾಸ್ತ್ರ) ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.

ಆ. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು,

ಇ. ಕಂದಾಯ ಇಲಾಖೆಯ ಎಲ್ಲಾ ಸಹಾಯಕ ಆಯುಕ್ತರುಗಳು.

ಈ. ಕರ್ನಾಟಕ ರಾಜ್ಯ ಪರಿಸರ ಮಂಡಳಿಯ ಅಧ್ಯಕ್ಷರು ಮತ್ತು ಸದಸ್ಯ ಕಾರ್ಯದರ್ಶಿಗಳು.

ಉ. ಕರ್ನಾಟಕ ರಾಜ್ಯ ಪರಿಸರ ಮಂಡಳಿಯ ಎಲ್ಲಾ ಪ್ರಾದೇಶಿಕ ಅಧಿಕಾರಿಗಳು.

ವಿವರಣೆ 1 – ಕರ್ನಾಟಕ ರಾಜ್ಯ ಪರಿಸರ ಮಂಡಳಿಯು ಪ್ಲ್ಯಾಸ್ಟಿಕ್ ತ್ಯಾಜ್ಯ (ಬಳಕೆ ಮತ್ತು ನಿರ್ವಹಣೆ) ನಿಯಮಗಳು 2011 ರ ನಿಯಮ (4) ರ ಷರತ್ತು (ಎ)ನಲ್ಲಿ ಪಟ್ಟಿಮಾಡಲಾಗಿರುವ ಕಾರ್ಯಗಳನ್ನು ಜಾರಿಗೊಳಿಸುವ ಅಧಿಕಾರವನ್ನು ಹೊಂದಿದ್ದು ಇನ್ನುಳಿದ ಸ್ಥಳಿಯ ಸಂಸ್ಥೆಗಳು ನಿಯಮ (4) ರ ಷರತ್ತು (ಬಿ) ನಲ್ಲಿ ಪಟ್ಟಿಮಾಡಲಾಗಿರುವ ಕಾರ್ಯಗಳನ್ನು ನಿರ್ವಹಿಸುವ ಅಧಿಕಾರವನ್ನು ಹೊಂದಿರುತ್ತದೆ.

ವಿವರಣೆ 2 – ಪರಿಸರ (ಸಂರಕ್ಷಣೆ) ಕಾಯಿದೆ, 1986 ರ ಸೆಕ್ಷನ್ 19ರಡಿ ಭಾರತ ಸರ್ಕಾರವು ಹೊರಡಿಸಿರುವ ಅಧಿಸೂಚನೆ ಸಂ; ಎಸ್.ಒ. 194 (ಇ) ದಿನಾಂಕ 16-04-1987 ರಲ್ಲಿ ಪಟ್ಟಿಮಾಡಲಾಗಿರುವ ಅಧಿಕಾರಿಗಳು ಸದರಿ ಅಧಿಸೂಚನೆಗೆ ಸಂಬಂಧಿಸಿದ ವಿಷಯಗಳ ಬಗ್ಗೆ ದೂರುಗಳನ್ನು ದಾಖಲಿಸುವ ಅಧಿಕಾರವನ್ನು ಹೊಂದಿರುತ್ತಾರೆ.

ಬಾಬು:ಜಿಪಿಆರ್.

## ರಾಜ್ಯದಲ್ಲಿ ಎಲ್ಲಾ ರೀತಿಯ ಪ್ಲಾಸ್ಟಿಕ್ ಬಳಕೆ ನಿಷೇದಕ್ಕೆ ಕ್ರಮ

ಬೆಂಗಳೂರು, ನವೆಂಬರ್ 3 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಎಲ್ಲಾ ರೀತಿಯ ಪ್ಲಾಸ್ಟಿಕ್ ಬಳಕೆ ನಿಷೇದಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುತ್ತಿದ್ದು ಈಗಾಗಲೇ ಕರಡು ನಿರ್ದೇಶನದ ಪ್ರತಿಯನ್ನು ಪ್ರಕಟಿಸಿ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ ಎಂದು ಅರಣ್ಯ ಸಚಿವ ರಮಾನಾಥ್ ರೈ ಪತ್ರಕರ್ತರಿಗೆ ತಿಳಿಸಿದರು.

ಪಶ್ಚಿಮ ಘಟ್ಟಗಳ ಸಂರಕ್ಷಣೆಗೆ ಸಂಬಂಧಿಸಿದಂತೆ ಡಾ: ಕಸ್ತೂರಿ ರಂಗನ್ ವರದಿ ಬಗ್ಗೆ ಕೇಂದ್ರ ಸರ್ಕಾರಕ್ಕೆ ಆಕ್ಷೇಪಣೆ ಸಲ್ಲಿಸಲಾಗಿದೆ. ಅರಣ್ಯ ಭೂಮಿ ಎಂದು ಪರಿಗಣಿಸಿರುವ ಭೂಮಿಗಳನ್ನು ಕಂದಾಯ ಇಲಾಖೆಯ ಜೊತೆ ಜಂಟಿ ಸಮೀಕ್ಷೆ ಮಾಡಲಾಗಿದೆ. ಡಿಸೆಂಬರ್‌ನೊಳಗೆ ಈ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು. ಮಂಗಳೂರಿನಲ್ಲಿ ಇದೇ ತಿಂಗಳು 19 ಮತ್ತು 20 ರಂದು ಬೃಹತ್ ಉದ್ಯೋಗ ಮೇಳ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಬಾಬು/ಕೆಪಿಪಿ/ಕೆಎಂ